**2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.**

**ಓ ಎಸ್ ನಂ.411-2016** **ಪಿ . ಡಬ್ಲುಃ 2**

| | |
|---|---|
| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ರಾಮನಾಯ್ಕ<br>ಸಿಂಧುವಳ್ಳಿ ಗ್ರಾಮ, ನಂಜನಗೂಡು ತಾ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 30-05-2024.** |

**ಪಾಟೀ ಸವಾಲುಃ ಶ್ರೀ ಕೆ.ಎಸ್.ಕೆ ವಕೀಲರಿಂದಃ**

ವಾದಿ ಮತ್ತು ಪ್ರತಿವಾದಿಗಳು ಸಂಬಂಧಿಕರಾಗಿರುತ್ತಾರೆ. ವಾದಿ ರವರ ಸ್ವತ್ತಿನ ಸರ್ವೇ ನಂಬರ್ ನನಗೆ ಗೊತ್ತಿಲ್ಲ. ನನಗೆ ವಾದಿಯವರ ಸ್ವತ್ತಿನ ಅಕ್ಕ-ಪಕ್ಕದಲ್ಲಿ ಯಾವುದೇ ಜಮೀನು ಇರುವುದಿಲ್ಲ, ಅದರೆ ನಾನು ವಾದಿಯವರ ಜಮೀನಿನ ಕೆಲಸಕ್ಕೆ ಹೋಗುತ್ತಿದ್ದೆನು. ಪ್ರತಿವಾದಿಯವರಿಗೆ ಎಷ್ಟು ಜಮೀನು ಇದೆ ಎಂದು ನನಗೆ ಗೊತ್ತಿಲ್ಲ. ವಾದಿ ಕಾಳಮಾದಮ್ಮ ನವರಿಗೆ ಸ್ವತ್ತು ಹೇಗೆ ಬಂತು ಎಂದು ನನಗೆ ಗೊತ್ತಿಲ್ಲ. ದಾವಾ ಷೆಡ್ಯೂಲ್ ಸ್ವತ್ತಿನಲ್ಲಿ ವಾದಿಯವರಾಗಲಿ ಅವರ ವಾಸುದಾರರಾಗಲಿ ಉಳುಮೆ ಮಾಡುತ್ತಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಷೆಡ್ಯೂಲ್ ಸ್ವತ್ತು ಪ್ರತಿವಾದಿಗಳಿಗೆ ಸೇರಿದ್ದಾಗಿದ್ದು ಅವರೇ ವ್ಯವಸಾಯ ಮಾಡುತ್ತಿದ್ದು, ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ವಾದಿಗೆ ಯಾವುದೇ ಹಕ್ಕು ಹಿತಾಸಕ್ತಿ ಇರುವುದಿಲ್ಲ ಎಂದರೆ ಸರಿಯಲ್ಲ. ವಾದಿಯವರಿಗೆ ಯಾವುದೇ ಜಮೀನು ಇಲ್ಲದೇ ಇರುವುದರಿಂದ ನಾನು ಅವರ ಬಳಿ ವ್ಯವಸಾಯಕ್ಕೆ ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ವಾದಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ವಾದಿಯವರೇ ಹೇಳಿ ಬರೆಸಿದ್ದು ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**ಕಿ.ಪ್ರ.ದ. ನ್ಯಾ ದಂ. ನಂಜನಗೂಡು**